ರೈತರ ಸಾಲಮನ್ನಾ ಕುರಿತು

ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

40 (78) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಇಲ್ಲಿಯವರೆಗೆ ಎಷ್ಟು ರೈತರ ಸಾಲ ಮನ್ನಾ ಮಾಡಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಚಿಕ್ಕಮಗಳೂರು ಜಿಲ್ಲೆಯ ಸರ್ಕಾರಿ, ಅರೆ ಸರ್ಕಾರಿ, ಖಾಸಗಿ, ಕೇಂದ್ರ ಸರ್ಕಾರದ ಬ್ಯಾಂಕ್‌ಗಳು ಮತ್ತು ಸಹಕಾರಿ ಬ್ಯಾಂಕ್‌ಗಳಲ್ಲಿ ರೈತರ ಬೆಳೆ ಸಾಲ ಮತ್ತು ಅದರ ಬಡ್ಡಿ ಸೇರಿ ಎಷ್ಟು ಕೋಟಿ ಸಾಲ ಬಾಕಿ ಇದೆ ಹಾಗೂ ಎಷ್ಟು ರೈತರು ಸಾಲ ಪಡೆದಿದ್ದಾರೆ; (ತಾಲ್ಲೂಕುವಾರು, ಬ್ಯಾಂಕ್‌ವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಯಾವ ಯಾವ ಮಾನದಂಡದ ಆಧಾರದ ಮೇಲೆ ರೈತರ ಸಾಲ ಮನ್ನಾ ಮಾಡಲಾಗಿದೆ ಹಾಗೂ ಯಾವ ಯಾವ ಬೆಳೆಗಳಿಗೆ ಸಾಲ ಮನ್ನಾ ಮಾಡಲಾಗಿದೆ? (ವಿವರ ನೀಡುವುದು)